ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಮುಸ್ಲಿಂ ವಸತಿ ಶಾಲೆಗಳ ಕುರಿತು

ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-

363 (333) ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಡಿಯಲ್ಲಿ ಎಷ್ಟು ಮುಸ್ಲಿಂ ವಸತಿ ಶಾಲೆಗಳಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಅದರಲ್ಲಿ ಹೆಣ್ಣು ಮಕ್ಕಳ ಸಂಖ್ಯೆ ಎಷ್ಟು;

(ಆ) ರಾಜ್ಯದಲ್ಲಿರುವ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಈ ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದ ಅಲ್ಪಸಂಖ್ಯಾತರು ವಿದ್ಯಾಭ್ಯಾಸ ಮಾಡುತ್ತಿದ್ದಾರೆ; ಜಾತಿವಾರು ಜಿಲ್ಲಾವಾರು ವಿವರ ನೀಡುವುದು; ವಸತಿ ಶಾಲೆಗಳಲ್ಲಿ ಯಾವ ಯಾವ ಧರ್ಮದವರಿಗೆ ಪ್ರಾರ್ಥನೆ ಸಲ್ಲಿಸಲು ಸ್ಥಳಾವಕಾಶ ನೀಡಲಾಗಿದೆ ;

(ಇ) ದಿನಾಂಕ:19-05-2018ರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ನಿರ್ದೇಶಕರ ಆದೇಶದಲ್ಲಿ ಇಲಾಖೆಯ ಆಡಳಿತಕ್ಕೆ ಒಳಪಡುವ ಎಲ್ಲಾ ವಸತಿ ಶಾಲೆಗಳಲ್ಲಿ ಅರೇಬಿಕ್ ಶಿಕ್ಷಣ ಭೋಧಿಸಲು ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು;

(ಈ) ಇಲಾಖೆಯ ವತಿಯಿಂದ ನಡೆಯುತ್ತಿರುವ ವಸತಿ ಶಾಲೆಗಳಲ್ಲಿ ಮುಸ್ಲಿಂ ವಿದ್ಯಾರ್ಥಿಗಳನ್ನು ಹೊರತುಪಡಿಸಿ ಇತರ ಧರ್ಮದ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿರುವುದರಿಂದ ಈ ವಿದ್ಯಾರ್ಥಿಗಳಿಗೂ ಅರೇಬಿಕ್ ಶಿಕ್ಷಣ ಮತ್ತು ಶುಕ್ರವಾರದ ಪ್ರಾರ್ಥನೆಯನ್ನು ಕಡ್ಡಾಯಗೊಳಿಸಿ ಹೊರಡಿಸಿರುವ ಆದೇಶವು ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡುವ ಬಗ್ಗೆ ಸರ್ಕಾರದ ನಿಲುವೇನು?